# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾವೇರಿ ಜಿಲ್ಲಾ ಪಂಚಾಯತ್‌ನ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಕೋವಿಡ್ 19 ಸಾಂಕ್ರಾಮಿಕ ರೋಗ ನಿಯಂತ್ರಣದ ವೇಳೆ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆಯಲ್ಲಿ ಕೋವಿಡ್ ನಿಂದ ಮೃತರಾದ ಅವಲಂಬಿತರಿಗೆ ಪರಿಹಾರವನ್ನು ಪಾವತಿಸಲು ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ ಇವರ ಪತ್ರ ದಿನಾಂಕ:2.12.2021

**ಪ್ರಸ್ತಾವನೆ:**

ಹಾವೇರಿ ಜಿಲ್ಲಾ ಪಂಚಾಯತ್ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಕೋವಿಡ್ 19 ಸಾಂಕ್ರಾಮಿಕ ರೋಗ ನಿಯಂತ್ರಣದ ವೇಳೆ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆಯಲ್ಲಿ ಕೋವಿಡ್ ನಿಂದ ಮೃತರಾದ ಸಿಬ್ಬಂದಿಯವರ ಅವಲಂಬಿತರಿಗೆ ಪರಿಹಾರವನ್ನು ಪಾವತಿಸಲು ರೂ.30.00ಲಕ್ಷಗಳನ್ನು ಹೆಚ್ಚುವರಿ ಲೆಕ್ಕ ಶೀರ್ಷಿಕೆ 2515-00-101-0-28-090ರಡಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯಿತಿ ಕಾರ್ಯಕ್ರಮದಡಿ ರೂ30.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 464 ವೆಚ್ಚ 6/2021(ಇ) ದಿನಾಂಕ: 9ನೇ ಡಿಸೆಂಬರ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಪರಿಹಾರ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.30.00ಲಕ್ಷ (ರೂಪಾಯಿ ಮೂವತ್ತು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಮುಖ್ಯ ಲೆಕ್ಕಾಧಿಕಾರಿಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಹಾವೇರಿ | 2515-00-101-0-28-090 | 30.00 |
| | ಒಟ್ಟು | | **30.00** |

1417845314
14.1.2022

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪ/ಪಂ.ರಾಜ್ ಇಂಜನಿಯರಿಂಗ್ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾವೇರಿ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ಹಾವೇರಿ
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ